235 (486) : ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೈಂದೂರು ವಿಧಾನ ಸಭಾ ಕ್ಷೇತ್ರದ ಪಡುವರಿ ಗ್ರಾಮದ ತಡೆಗೋಡೆ ಪ್ರಸ್ತಾವನೆ ಈಗ ಯಾವ ಹಂತದಲ್ಲಿರುತ್ತದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಪಡುವರಿ ಗ್ರಾಮದ ಬಳಿ ತಡೆಗೋಡೆ ನಿರ್ಮಿಸುವ ಕಾಮಗಾರಿಗೆ ಕೇಂದ್ರ ಸರ್ಕಾರದಿಂದ ರೂ. 3.21 ಕೋಟಿ ಅಂದಾಜಿಗೆ ಮಂಜೂರಾತಿ ದೊರೆತಿರುತ್ತದೆ. ಇದನ್ನು (ಸೆಂಟ್ರಲ್ ವಾಟರ್ ಪವರ್ ರಿಸರ್ಚ್ ಸ್ಟೇಷನ್) ಪುಣೆ ರವರ ವಿನ್ಯಾಸದಂತೆ ಅಂದಾಜು ಪಟ್ಟಿಯನ್ನು ತಯಾರಿಸಿದಾಗ 1170 ಮೀಟರ್ ಉದ್ದದ ಬದಲಾಗಿ 654 ಮೀಟರ್ ಮಾತ್ರ ತಡೆಗೋಡೆ ಸಾಧ್ಯವಾಗುತ್ತದೆ. ಈ ಬಗ್ಗೆ ಅನುಮೋದನೆ ನೀಡಲು ಮತ್ತು ಉಳಿದ 516 ಮೀಟರ್ ಉದ್ದದ ತಡೆಗೋಡೆ ನಿರ್ಮಾಣ ಮಾಡಲು ಬೇಕಾದ ರೂ. 2.54 ಕೋಟಿಯ ಕಾಮಗಾರಿಗೂ ಒಪ್ಪಿಗೆ ನೀಡಿ ಕೇಂದ್ರ ಸರ್ಕಾರದ ಅನುದಾನವನ್ನು ಬಿಡುಗಡೆ ಮಾಡಲು ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಮಂಜೂರಾತಿ ದೊರೆತ ಕೂಡಲೇ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು.

237 (492) : ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೈಂದೂರು ಕ್ಷೇತ್ರದ ಬಡಾಕೆರೆ ಸೇತುವೆ ನಿರ್ಮಾಣಕ್ಕೆ ಸರ್ಕಾರದಿಂದ ಅನುಮೋದನೆ ದೊರೆತು ಗುದ್ದಲಿ ಪೂಜೆಯೂ ನಡೆದಿದ್ದರೂ ಸಹ ಕಾಮಗಾರಿ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರದಿಂದ ಬಿಡುಗಡೆಯಾಗಬೇಕಾದ ಶೇಕಡಾ 10ರ ಅನುದಾನವು ಯಾವಾಗ ಬಿಡುಗಡೆಯಾಗುತ್ತದೆ.

ಇ) ಸದರಿ ಕೆಲಸವು ಎಂದಿನಿಂದ ಪ್ರಾರಂಭವಾಗುತ್ತದೆ.

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಹೌದು.

ಆ) 2004–05ನೇ ಸಾಲಿಗೆ ಬಿಡುಗಡೆಗೊಳಿಸಿದ ರೂ. 101.00 ಲಕ್ಷಗಳ ಅನುದಾನದಲ್ಲಿ ಈ ಕಾಮಗಾರಿಯೂ ಸೇರಿರುತ್ತದೆ.

ಇ) ಕಾರ್ಯ ನಿರ್ವಾಹಕ ಅಭಿಯಂತರರು, ಬಂದರು ಹಾಗೂ ಮೀನುಗಾರಿಕೆ ವಿಭಾಗ, ಉಡುಪಿ ಇವರು ಕಾಮಗಾರಿಗೆ ಟೆಂಡರುಗಳನ್ನು ಕರೆದಿರುತ್ತಾರೆ.

ಈ ಪ್ರಕ್ರಿಯೆ ಮುಗಿದನಂತರ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

238 (1408) : ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) ಮಾನ್ಯ ಮಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?